KARNATAKA SUCCESS NO 1
Kannada Daily

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.

Volume: 02 Issue-110
ಗುರುವಾರ 27 ಫೆಬ್ರವರಿ 2025

Price: 2.00 Rs. Pages - 2

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಇಬ್ಬರ ಬಂಧನ; 4 ಕೆ.ಜಿ ಗಾಂಜಾ ಜಪ್ತಿ

ತುಮಕೂರು: ತಾಲ್ಲೂಕಿನ ಪಂಡಿತನಹಳ್ಳಿ ಹ್ಯಾಂಡ್‌ಪೋಸ್ಟ್ ಬಳಿ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರನ್ನು ಸೈಬರ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸುಮಾರು 4 ಕೆ.ಜಿ ಗಾಂಜಾ ಜಪ್ತಿ ಮಾಡಿದ್ದಾರೆ. ಮಾಗಡಿ ತಾಲ್ಲೂಕು ಕುದೂರಿನ ಚಂದ್ರಶೇಖರ್ (21), ಕೆ.ಎಸ್.ವಿನೋದ ಕುಮಾರ್ (21) ಬಂಧಿತರು. ಹೊನ್ನುಡಿಕೆ ಮಾರ್ಗದ ಪಂಡಿತನಹಳ್ಳಿ ಹ್ಯಾಂಡ್‌ಪೋಸ್ಟ್ ಬಳಿ ಗಾಂಜಾ ಮಾರಾಟ ಮಾಡುತ್ತಿದ್ದರು. ಕೈಯಲ್ಲಿ ಎರಡು ಬ್ಯಾಗ್ ಹಿಡಿದು ಕುಳಿತಿದ್ದರು. ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆಗಾಗ ಮಾಗಡಿಯಿಂದ ಬಂದು ಜಿಲ್ಲೆಯಲ್ಲಿ ಗಾಂಜಾ ಮಾರಾಟ ಮಾಡಿ ವಾಪಸ್ ಹೋಗುತ್ತಿದ್ದರು. ಇಬ್ಬರು ಹಲವು ವರ್ಷಗಳಿಂದ ಈ ಕೃತ್ಯದಲ್ಲಿ ತೊಡಗಿಸಿಕೊಂಡಿದ್ದರು. ಈ ಹಿಂದೆಯೂ ಒಮ್ಮೆ ಪೊಲೀಸರು ಇವರ ಬಂಧನಕ್ಕೆ ಬಲೆ ಬೀಸಿದಾಗ ತಪ್ಪಿಸಿಕೊಂಡಿದ್ದರು.



ತುಮಕೂರಿನ ಕುಣಿಗಲ್ ರಸ್ತೆಯಲ್ಲಿರುವ ಮಾರುತಿ ಬನಶಂಕರಿ ಮತ್ತು ಬಸವಣ್ಣ ದೇವಾಲಯದಲ್ಲಿ ಶಿವರಾತ್ರಿ ಪ್ರಯುಕ್ತ ವಿಶೇಷ ಪೂಜೆ ಸಲ್ಲಿಸಿದರು. ದೇವಾಲಯದ ಮೇಲ್ಭಾಗದಲ್ಲಿರುವ ಶಿವಮೂರ್ತಿಗೆ ಪೂಜೆ ಸಲ್ಲಿಸಿದರು.



ತುಮಕೂರಿನ ವಿವಿಧ ರಸ್ತೆಗಳಲ್ಲಿ ಬ್ರಹ್ಮಕುಮಾರಿ ಈಶ್ವರೀ ವಿಶ್ವವಿದ್ಯಾಲಯದ ವತಿಯಿಂದ ಶಿವರಾತ್ರಿ ಪ್ರಯುಕ್ತ ವಾಹನಗಳ ಮೇಲೆ ಸಾಮೂಹಿಕ ಶಿವಲಿಂಗುಗಳ ಮೆರವಣಿಗೆ ನಡೆಯಿತು.



ತುಮಕೂರಿನ ಬಿ.ಹೆಚ್. ರಸ್ತೆಯ ಭದ್ರಮ್ಮ ವೃತ್ತದಲ್ಲಿರುವ ಸೋಮೇಶ್ವರಸ್ವಾಮಿ ದೇವಾಲಯದಲ್ಲಿ ಶಿವಲಿಂಗಕ್ಕೆ ಭಕ್ತರು ಸರದಿಯ ಸಾಲಿನಲ್ಲಿ ನಿಂತು ಹಾಲಿನ ಅಭಿಷೇಕ ನೆರವೇರಿಸಿ ವಿಶೇಷ ಪೂಜೆ ಸಲ್ಲಿಸಿದರು.

# ಶ್ರದ್ಧಾಭಕ್ತಿಗಳಿಂದ ಮಹಾ ಶಿವರಾತ್ರಿ ಆಚರಣೆ; ದೇವಸ್ಥಾನಗಳಲ್ಲಿ ಮೊಳಗಿದ ಶಿವನಾಮ ಸ್ಮರಣೆ

ತುಮಕೂರು: ಶಿವನನ್ನು ಆರಾಧಿಸುವ ಹಾಗೂ ಉಪವಾಸ ವ್ರತದ ಪವಿತ್ರ ಹಬ್ಬವಾದ ಮಹಾಶಿವರಾತ್ರಿಯನ್ನು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಜಿಲ್ಲೆಯಾದ್ಯಂತ ಶಿವನ ದೇವಾಲಯಗಳು ಸೇರಿದಂತೆ ವಿವಿಧ ದೇವಾಲಯಗಳಲ್ಲಿ ಇಂದು ಮುಂಜಾನೆಯಿಂದಲೇ ಅಭಿಷೇಕ, ವಿವಿಧ ಧಾರ್ಮಿಕ ಪೂಜೆಗಳೊಂದಿಗೆ ಶಿವನಾಮ ಸ್ಮರಣೆ ಮೊಳಗಿದವು. ಮುಂಜಾನೆಯಿಂದಲೇ ವಿವಿಧ ದೇವಾಲಯಗಳಲ್ಲಿ ಶಿವರಾತ್ರಿ ಹಬ್ಬದ ವಿಶೇಷವಾಗಿ ಧಾರ್ಮಿಕ ಪೂಜಾ ವಿಧಿ ವಿಧಾನಗಳು ನೆರವೇರಿದವು.

ನಗರದ ಬಿ.ಹೆಚ್. ರಸ್ತೆಯ ಭದ್ರಮ್ಮ ವೃತ್ತದಲ್ಲಿರುವ ಸೋಮೇಶ್ವರಸ್ವಾಮಿ ದೇವಾಲಯ, ಹೊರಪೇಟೆಯಲ್ಲಿರುವ ನೀಲಕಂಠೇಶ್ವರ ಸ್ವಾಮಿ ದೇವಾಲಯ, ಕುಣಿಗಲ್ ರಸ್ತೆಯಲ್ಲಿರುವ ಮಾರುತಿ ಬನಶಂಕರಿ ಮತ್ತು ಬಸವಣ್ಣ ದೇವಾಲಯ, ಅಮರಜ್ಯೋತಿನಗರದ ಸಾಯಿಬಾಬ ದೇವಾಲಯದ ಆವರಣದಲ್ಲಿರುವ ಶಿವಲಿಂಗ, ಟಿಜಿಎಂಸಿ ಬ್ಯಾಂಕ್ ಆವರಣದ ಲಕ್ಷ್ಮಿ ದೇವಾಲಯ, ಹೊರಪೇಟೆಯ ಕಾಶಿ ವಿಶ್ವನಾಥ ದೇವಾಲಯ, ಸಿದ್ದರಾಮೇಶ್ವರ ಬಡಾವಣೆಯ ಈಶ್ವರ ದೇವಾಲಯ, ಸರಸ್ವತಿಪುರಂ ಶಿವನ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಿಗೆ ಇಂದು ನಸುಕಿನಿಂದಲೇ ಮಹಿಳೆಯರು, ಮಕ್ಕಳು, ವೃದ್ಧರು ಸೇರಿದಂತೆ ಕುಟುಂಬ ಸಮೇತರಾಗಿ ತೆರಳಿ ಶಿವನ ದರ್ಶನ ಪಡೆದು ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ನಗರದ ಹೊರಪೇಟೆಯ ನೀಲಕಂಠೇಶ್ವರ ಸ್ವಾಮಿ ದೇವಾಲಯದಲ್ಲಿ ಶಿವರಾತ್ರಿ ಹಬ್ಬದ ಅಂಗವಾಗಿ ಮುಂಜಾನೆಯಿಂದ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ನೆರವೇರಿತು. ಬಿ.ಹೆಚ್. ರಸ್ತೆಯ ಟಿಜಿಎಂಸಿ ಬ್ಯಾಂಕ್ ಆವರಣದಲ್ಲಿ ಭಕ್ತರಿಗಾಗಿ ವಿಶೇಷವಾಗಿ ಶಿವನ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.



ಭದ್ರಮ್ಮ ವೃತ್ತದಲ್ಲಿರುವ ಸೋಮೇಶ್ವರ ದೇವಾಲಯದಲ್ಲಿ ಬೆಳಿಗ್ಗೆಯಿಂದಲೇ ಭಕ್ತರ ದಂಡು ಕಂಡು ಬಂದಿದ್ದು, ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಭಕ್ತರು ಸರದಿಯ ಸಾಲಿನಲ್ಲಿ ನಿಂತು ಶ್ರೀಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಪುನೀತರಾದರು.

ಅಮರಜ್ಯೋತಿನಗರ ಸಾಯಿಬಾಬ ದೇವಾಲಯದ ಆವರಣದಲ್ಲಿರುವ ಶಿವಲಿಂಗಕ್ಕೆ ಭಕ್ತಾದಿಗಳು ಮುಂಜಾನೆಯಿಂದಲೇ ಹಾಲಿನ ಅಭಿಷೇಕ ಮಾಡಿ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

ಕ್ಯಾತಸಂದ್ರದ ಹರಿಹರ ಕ್ಷೇತ್ರವೆಂದೇ ಪ್ರಸಿದ್ಧವಾದ ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಾಲಯದಲ್ಲಿ ನಾಲ್ಕು ಯಾಮದ ಪೂಜೆ, ವಿಶೇಷ ಅಲಂಕಾರ ಏರ್ಪಡಿಸಲಾಗಿತ್ತು.


ತಾಲ್ಲೂಕಿನ ದೇವರಾಯನದುರ್ಗ ಅರಣ್ಯ ಪ್ರದೇಶದಲ್ಲಿರುವ ಶ್ರೀ ವಿದ್ಯಾಶಂಕರ ದೇವಾಲಯದಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿಶೇಷ ಪೂಜಾದಿಗಳು ನೆರವೇರಿದವು. ಬೆಳಿಗ್ಗೆ 6.30 ರಿಂದಲೇ ವಿಶೇಷ ಪೂಜಾದಿಗಳು ನೆರವೇರಿತು.

ಶ್ರೀರಾಮನಗರದ ಅಮಾನಿಕೆರೆ ಸಮೀಪವಿರುವ ಅಖಿಲ ಉಪ್ಪಾರ ಸಂಘದ ವಿದ್ಯಾಭಿವೃದ್ಧಿ ಕಟ್ಟಡದ ಮೇಲ್ಭಾಗದಲ್ಲಿರುವ ಶಿವಲಿಂಗ ಮೂರ್ತಿಗೆ ಹಾಗೂ ಕುಣಿಗಲ್ ರಸ್ತೆಯಲ್ಲಿರುವ ಮಾರುತಿ ಬನಶಂಕರಿಯ ಮತ್ತು ಬಸವಣ್ಣ ದೇವಾಲಯದ ಮೇಲ್ಭಾಗದಲ್ಲಿರುವ ಶಿವನ ಬೃಹತ್ ಮೂರ್ತಿಗೆ ಹಬ್ಬದ ಪ್ರಯುಕ್ತ ವಿಶೇಷ ಅಲಂಕಾರ ಮಾಡಲಾಗಿತ್ತು. ಭಕ್ತರು ಈ ಎರಡು ಶಿವನಮೂರ್ತಿಗಳಿಗೆ ಪೂಜೆ ಸಲ್ಲಿಸಿ ಕಣ್ತುಂಬಿಕೊಂಡರು.

ಮುಂಜಾನೆಯಿಂದಲೇ ನಗರದ ಎಲ್ಲ ದೇವಾಲಯಗಳಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಭಕ್ತಾದಿಗಳಿಂದ ಶಿವನಾಮ ಸ್ಮರಣೆ, ಭಜನೆಗಳು ಮೊಳಗಿದವು.

ರಾತ್ರಿ ಶಿವನ ದೇವಾಲಯಗಳಲ್ಲಿ ಭಜನೆ, ಹರಿಕಥೆ, ದೇವರನಾಮಗಳು ನಡೆಯಿತು.

## ಜಿಲ್ಲೆಗಿಂದು ಪೌರಾಡಳಿತ ಸಚಿವ ರಹೀಂ ಖಾನ್ ಭೇಟಿ



ತುಮಕೂರು: ರಾಜ್ಯ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಫೆಬ್ರವರಿ 27ರಂದು ಜಿಲ್ಲೆಗೆ ಭೇಟಿ ನೀಡಿ ವಿವಿಧ ಸಭೆ, ಸಮಾರಂಭಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಚಿವರು ಫೆ.27ರ ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಬೆಳಿಗ್ಗೆ 11 ಗಂಟೆಗೆ ನಗರದ ಇಂದಿರಾ ಕ್ಯಾಂಟೀನ್ ಮತ್ತು ಘನತ್ಯಾಜ್ಯ ನಿರ್ವಹಣಾ ಘಟಕವನ್ನು ಪರಿಶೀಲಿಸಲಿದ್ದಾರೆ.

ನಂತರ ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ನಗರದಿಂದ ಮಧ್ಯಾಹ್ನ 2 ಗಂಟೆಗೆ ಹೊರಟು 2.45 ಗಂಟೆಗೆ ಶಿರಾ ಪಟ್ಟಣದ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ನಂತರ 3 ಗಂಟೆಗೆ ಶಿರಾ ನಗರಸಭೆಗೆ ಭೇಟಿ ನೀಡಿ 4 ಗಂಟೆಗೆ ರಸ್ತೆ ಮಾರ್ಗವಾಗಿ ಬೆಂಗಳೂರಿಗೆ ತೆರಳಲಿದ್ದಾರೆ.

# ಸಾವಯವ ಕೃಷಿ: ಸಂಶೋಧನೆ ಆಧಾರಿತ ವೈಜ್ಞಾನಿಕ ಬೆಲೆ ನಿಗಧಿ

ತುಮಕೂರು: ಕೃಷಿ ತಂತ್ರಜ್ಞರ ಸಂಸ್ಥೆ ಮತ್ತುಕೆಪೆಕ್ ಸಂಸ್ಥೆ ವತಿಯಿಂದ ಬೆಂಗಳೂರಿನ ಕ್ವೀನ್‌ರಸ್ತೆಯಲ್ಲಿ ಇರುವ ಕೃಷಿ ತಂತ್ರಜ್ಞರ ಸಂಸ್ಥೆಯ ಡಾ.ಹಚ್.ಆರ್. ಅರಕೇರಿ ಸಭಾಂಗಣದಲ್ಲಿ ನಡೆದ 'ಸಾವಯವ ಕೃಷಿ, ಉತ್ಪಾದನೆ, ಪ್ರಮಾಣೀಕರಣ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು' ಕಾರ್ಯಾಗಾರದಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ, ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಅಶೋಕ ದಳವಾಯಿ ರವರೊಂದಿಗೆ ಬೆಂಗಳೂರಿನ ಅವರ ಕಚೇರಿಯಲ್ಲಿ ಸಮಾಲೋಚನೆ ನಡೆಸಲಾಯಿತು.

ಕರ್ನಾಟಕ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿಯೂ, ಸಾವಯವ ಕೃಷಿಕರ ಬೆಳೆ ಆಧಾರಿತ ಸಂಶೋಧನೆ ನಡೆಸಿ, ಖರ್ಚು ವೆಚ್ಚಗಳ ಅವಲೋಕನದೊಂದಿಗೆ, ಸಾವಯವ ಕೃಷಿ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಲು 'ರೈತರ, ವಿಜ್ಞಾನಿಗಳ ಮತ್ತು ಅಧಿಕಾರಿಗಳ ಸಹಭಾಗಿತ್ವದೊಂದಿಗೆ ವಿಶೇಷ ಯೋಜನೆ' ಜಾರಿಗೊಳಿಸಲು ಚರ್ಚಿಸಲಾಯಿತು.

ಕಾರ್ಯಾಗಾರದಲ್ಲಿ ಮೂಡಿ ಬಂದ ಎಲ್ಲರ



ಅಭಿಪ್ರಾಯಗಳನ್ನು ಕ್ರೋಢಿಕರಿಸಿ, ಕೇಂದ್ರ ಮತ್ತುರಾಜ್ಯ ಸರ್ಕಾರಗಳಿಗೆ ಮನವಿ ಸಲ್ಲಿಸಲು ಕರಡು ಪ್ರತಿ ಸಿದ್ಧಪಡಿಸಿ, ಡಾ.ಅಶೋಕ ದಳವಾಯಿರವರ ಅಧ್ಯಕ್ಷತೆಯಲ್ಲಿ, ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಸಾವಯವ ಕೃಷಿಕರೊಂದಿಗೆ ಮತ್ತೊಮ್ಮೆ ಸಭೆ ನಡೆಸಿ ಅಂತಿಮ ಗೊಳಿಸಲು ಯೋಚಿಸಲಾಯಿತು.

ಕರ್ನಾಟಕ ರಾಜ್ಯದಲ್ಲಿ ಬೆಳೆಯುವ ಆಹಾರ ಬೆಳೆ, ವಾಣಿಜ್ಯ ಬೆಳೆ, ಔಷಧಿಗಿಡಗಳು, ಕಾಡು ಕೃಷಿ, ಸೇರಿದಂತೆ ಪ್ರತಿಯೊಂದು ಬೆಳೆವಾರು 1947 ಕ್ಕಿಂತ ಮೊದಲು ಯಾವ ಪದ್ಧತಿ ಇತ್ತು, 1947 ರಿಂದ 2024 ರವರೆಗೆಯಾವ ಪದ್ಧತಿ ಬಂತು, 2047ರ ವೇಳೆಗೆ ಯಾವ ನಿರ್ಧಿಷ್ಠ ಗುರಿಯೊಂದಿಗೆ ಅಭಿವೃದ್ಧಿ ಹೆಜ್ಜೆ ಹಾಕಬೇಕು ಎಂಬ ಬಗ್ಗೆ ಸಂಶೋಧನಾ ವರದಿಗಳ ಆಧಾರದಲ್ಲಿ ಮುಂದುವರೆಯುವ ಅವಶ್ಯಕತೆಯ ಬಗ್ಗೆಯೂ ಚಿಂತನೆ ನಡೆಯಿತು. 'ಸಾವಯವ ಕೃಷಿ, ಉತ್ಪಾದನೆ, ಪ್ರಮಾಣೀಕರಣ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು' ತಂತ್ರಗಾರಿಕೆ, ರಾಜ್ಯದ ಪ್ರತಿಯೊಂದು ಗ್ರಾಮ ಮತ್ತು ಬಡಾವಣೆವರೆಗೂ ತಲುಪಬೇಕು. ಸಾವಯವ ಕೃಷಿಕರ ನೂರಾರು ಸೋಶಿಯಲ್ ಮೀಡಿಯಾ ಗುಂಪುಗಳಿವೆ, ಸಾವಿರಾರು ಜನರು ಮೌನ ಆಂದೋಲನ ಕೈಗೊಂಡಿದ್ದಾರೆ, ಎಲ್ಲರ ಅಭಿಪ್ರಾಯಗಳೊಂದಿಗೆ ರೈತರ ಆದಾಯ ದುಪ್ಪಟ್ಟು ಮಾಡುವುದರ ಜೊತೆಗೆ, ಗ್ರಾಹಕರಿಗೂ ವಿಷಮುಕ್ತ ಆಹಾರ ಪಾರದರ್ಶಕ ರೀತಿಯಲ್ಲಿ, ನೇರವಾಗಿ ಮನೆ ಬಾಗಿಲಿಗೆ ತಲುಪುವ ವ್ಯವಸ್ಥೆ ಬಗ್ಗೆಯೂ ವಿಶೇಷ ಗಮನ ಹರಿಸಲಾಯಿತು.

ನಂಬರ್ ಒನ್ ಕರ್ನಾಟಕ @ 2047 ಪೂರಕವಾಗಿ, ಪ್ರತಿಯೊಬ್ಬ ವ್ಯಕ್ತಿಯ, ಪ್ರತಿಯೊಂದು ಕುಟುಂಬದ ಆದಾಯ/ಆರೋಗ್ಯ ಸಧೃಢವಾಗಿಸಲು' ವಿಷಮುಕ್ತ ಪಂಚಭೂತ' ಆಂದೋಲನ ಮೊದಲ ಹೆಜ್ಜೆಯಾಗಲಿದೆ ಎಂದು ಅಭಿವೃದ್ಧಿರೆವೂಲ್ಯೂಷನ್ ಫೋರಂ ಅಧ್ಯಕ್ಷ ಕುಂದರನಹಳ್ಳಿ ರಮೇಶ್ ತಿಳಿಸಿದ್ದಾರೆ.

## ಸರ್ಕಾರ ಬಗರ್ ಹುಕುಂ ರೈತರ ಕಷ್ಟಕ್ಕೆ ಸ್ಪಂದಿಸುವಂತೆ ಆಗ್ರಹಿಸಿ ಪ್ರತಿಭಟನೆ



ತಿಪಟೂರು: ಬಗರ್ ಹುಕುಂ ರೈತರಿಗೆ ಸಾಗುವಳಿ ಚೀಟಿ ನೀಡಬೇಕು ಹಾಗೂ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿ ಪ್ರಾಂತ ರೈತ ಸಂಘ ಹಾಗೂ ರಾಜ್ಯ ಕೃಷಿ ಕೂಲಿಕಾರರ ಸಂಘದ ವತಿಯಿಂದ ಸೋಮವಾರ ತಾಲೂಕು ಆಡಳಿತದ ಸೌಧದ ಮುಂದೆ ಪ್ರತಿಭಟನೆ ನಡೆಸಿ ಗ್ರೇಡ್-2 ತಹಸೀಲ್ದಾರ್ ರಮೇಶ್‌ರವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಚನ್ನಬಸವಣ್ಣ ಮಾತನಾಡಿ, ತಾಲೂಕಿನಾದ್ಯಂತ ದಲಿತರು, ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರು ನೂರಾರು ಗ್ರಾಮಗಳ ಸಾವಿರಾರು ರೈತರು, ಕೃಷಿಕೂಲಿಕಾರರು, 40-50 ವರ್ಷಗಳಿಂದ ಬಗರ್‌ಹುಕುಂ ಸಾಗುವಳಿ ಮಾಡುತ್ತಾ ಜೀವನ ನಡೆಸುತ್ತಿದ್ದಾರೆ. ಹಲವು ಸಾಗುವಳಿದಾರರು ಲಕ್ಷಾಂತರ ರೂ ಖರ್ಚು ಮಾಡಿ ಕೊಳವೆ ಬಾವಿಗಳನ್ನು ಹಾಕಿ ವಿದ್ಯುತ್ ಸಂಪರ್ಕಗಳನ್ನು ಪಡೆದು ತೆಂಗು ತೋಟಗಳ ಜೊತೆಗೆ ಕೃಷಿಯನ್ನು ಮಾಡಿಕೊಂಡು ಬರುತ್ತಿದ್ದಾರೆ. ಕೆಲವು ಸಾಗುವಳಿದಾರರಿಗೆ ಸಾಗುವಳಿ ಸಕ್ರಮ ಚೀಟಿಗಳು ಸಿಕ್ಕಿದ್ದರೂ ಒಕ್ಕಲೆಬ್ಬಿಸುವ ಆಕ್ರಮಣಗಳಿಗೆ ತುತ್ತಾಗಿದ್ದಾರೆ. ಸಾವಿರಾರು ರೈತರ ಅರ್ಜಿಗಳು ಹತ್ತಾರು ವರ್ಷಗಳಿಂದ ಭೂ ಮಂಜೂರಾತಿ ಸಮಿತಿಗಳ ಮುಂದೆ ಇವೆ. ಬಗರ್ ಹುಕ್ಕುಂ ಸಾಗುವಳಿದಾರ ರೈತರು ಹಲವು ವರ್ಷಗಳಿಂದ ಕೃಷಿಗೆ ಒಳಪಟ್ಟು ರೈತರ ಸ್ವಾಧೀನದಲ್ಲಿದ್ದರೂ ಕಂದಾಯ ಇಲಾಖೆಯ ಪಹಣಿ ಇತ್ಯಾದಿಗಳಲ್ಲಿ ವಿವಿಧ ಹೆಸರಿನ ಅರಣ್ಯ ಭೂಮಿಗಳು, ಗೋಮಾಳ, ಅಮೃತ ಕಾವಲ್ ಎಂದು ದಾಖಲಾಗಿವೆ. ಈ ಕಾರಣದಿಂದ ರೈತರಿಗೆ ಭೂಮಿಗಳನ್ನು ಸಕ್ರಮ ಮಾಡಲಾಗುತ್ತಿಲ್ಲ. ಈ ನಡುವೆ ಅರಣ್ಯ ಇಲಾಖೆಯವರು ಏಕಾಏಕಿ ಈ ಭೂಮಿ ನಮ್ಮ ಇಲಾಖೆಗೆ ಸೇರಿದ್ದು ಎಂದು ದಬ್ಬಾಳಿಕೆ ಮಾಡಿ ಸುಳ್ಳು ಮೊಕದ್ದಮೆಗಳನ್ನು ಹಾಕಿ ರೈತರನ್ನು ಬೆದರಿಸಿ ಒಕ್ಕಲೆಬ್ಬಿಸುತ್ತಿದ್ದು ಇದು ಕೂಡಲೆ ನಿಲ್ಲಿಸಬೇಕು. ಇತ್ತೀಚಿನ ದಿನಗಳಲ್ಲಿ ಶಿಕ್ಷಣ, ಆರೋಗ್ಯ ಇತ್ಯಾದಿಗಳೆಲ್ಲ ಬೆಲೆ ದುಬಾರಿಯಾಗಿದೆ.

ಇದರಿಂದ ಜೀವಿತಾವಧಿಯಲ್ಲಿ ಸ್ವಂತ ಮನೆ ಮಾಡಬೇಕೆನ್ನುವ ಕನಸು ಬಗರ್‌ಹುಕುಂ ರೈತರಿಗೆ ಕನಸಾಗಿಯೇ ಉಳಿಯುತ್ತಿದೆ. ನಿವೇಶನ ಇರುವ ಕೆಲವರಿಗೆ ಸರ್ಕಾರ ಮನೆಗಳನ್ನು ಕೊಡುವ ಕೆಲಸ ಮಾಡುತ್ತಿದೆ. ಅದರೆ ನಿವೇಶನ ಇಲ್ಲದವರಿಗೆ ಮನೆಯು ಇಲ್ಲ ಇತ್ತ ನಿವೇಶನವೂ ಇಲ್ಲ. ಆದ್ದರಿಂದ ಆಯ್ಕೆಯಾಗಿರುವ ಶಾಸಕರುಗಳು ಬಗರ್‌ಹುಕುಂ ರೈತರ ಕಷ್ಟವನ್ನು ಅರಿತು ಈ ಬಗ್ಗೆ ಸದನದಲ್ಲಿ ಮಾತನಾಡಿ ರೈತರಿಗೆ ನ್ಯಾಯ ದೊರಕಿಸಿಕೊಡಬೇಕು ಅಲ್ಲಿಯವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದರು.

ಪ್ರತಿಭಟನೆಯಲ್ಲಿ ಪ್ರಾಂತ ರೈತ ಸಂಘದ ತಾ. ಅಧ್ಯಕ್ಷ ಮಲ್ಲಿಕಾರ್ಜುನಯ್ಯ, ಉಪಾಧ್ಯಕ್ಷೆ ರಾಜಮ್ಮ, ಪ್ರಧಾನ ಕಾರ್ಯದರ್ಶಿ ಸುಧಾಕರ್, ರೈತ ಸಂಘಟನೆಯ ಮಂಜುನಾಥ್, ಕೊಟ್ಟೂರಪ್ಪ, ಅಲ್ಲಾಬಕ್ಷ, ಸಿದ್ದಪ್ಪ, ತ್ಯಾಗ ರಾಜು ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಬಗರ್‌ಹುಕುಂ ರೈತರು ಭಾಗವಹಿಸಿದ್ದರು.

# ನಾಳೆಯಿಂದ ರೈತ ಉತ್ಪಾದಕ ಸಂಸ್ಥೆಗಳ ಮೇಳ

ತುಮಕೂರು: ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರಿನ ರೈತ ಉತ್ಪಾದಕ ಸಂಸ್ಥೆಗಳ ಉತ್ಕೃಷ್ಟ ಕೇಂದ್ರ ಹಾಗೂ ಸಣ್ಣ ರೈತರ ಕೃಷಿ ವ್ಯಾಪಾರ ಒಕ್ಕೂಟದ ಸಹಯೋಗದಲ್ಲಿ ಫೆಬ್ರವರಿ 28 ರಿಂದ ಮಾರ್ಚ್ 2ರವರೆಗೆ ಬೆಂಗಳೂರಿನ ತೋಟಗಾರಿಕೆ ಮಹಾ ವಿದ್ಯಾಲಯದಲ್ಲಿ ರೈತ ಉತ್ಪಾದಕ ಸಂಸ್ಥೆ (ಎಫ್.ಪಿ.ಓ.)ಗಳ ಮೇಳವನ್ನು ಆಯೋಜಿಸಲಾಗಿದೆ.

ಮೇಳವನ್ನು ಅಂದು ಬೆಳಿಗ್ಗೆ 10:30 ಗಂಟೆಗೆ ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಉದ್ಘಾಟಿಸಲಿದ್ದು. ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧ್ಯಕ್ಷತೆವಹಿಸಲಿದ್ದಾರೆ.

ರೈತರನ್ನು ಒಟ್ಟುಗೂಡಿಸಿ ಅವರ ಉತ್ಪಾದನೆ ಹಾಗೂ ಮಾರುಕಟ್ಟೆ ಸಾಮರ್ಥ್ಯವನ್ನು ವೃದ್ಧಿಸಲು ರೈತ ಉತ್ಪಾದಕರ ಸಂಸ್ಥೆಗಳನ್ನು ರಚಿಸುವುದು ಸೂಕ್ತವೆಂದು ಪರಿಗಣಿಸಿ ಮೇಳವನ್ನು ಆಯೋಜಿಸಲಾಗಿದೆ.

ಮೇಳದಲ್ಲಿ ಭಾರತ ಸರ್ಕಾರವು 2013ರಲ್ಲಿ 1956ರ ಕಂಪನಿ ಕಾಯ್ದೆಗೆ ತಿದ್ದುಪಡಿ ತಂದು ಕಂಪನಿ ಕಾಯ್ದೆಯಡಿ ರೈತ ಉತ್ಪಾದಕರ ಸಂಸ್ಥೆಗಳನ್ನು ನೋಂದಾಯಿಸಲು ಅವಕಾಶ ನೀಡಲಾಗಿದೆ. ರೈತ ಉತ್ಪಾದಕರ ಸಂಸ್ಥೆಯು ಪ್ರಾಥಮಿಕ ಸಂಸ್ಥೆಯಾಗಿದ್ದು, ಕೃಷಿಗೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ಪಾಲ್ಗೊಂಡ ಸದಸ್ಯ ರೈತರಿಗೆ ತಾಂತ್ರಿಕ ಸಲಹೆ, ಸಾಮರ್ಥ್ಯ ಬಲವರ್ಧನೆ, ಉತ್ತಮ ಗುಣಮಟ್ಟದ ಪರಿಕರಗಳನ್ನು ಪೂರೈಸುವುದು, ಬೆಳೆದ ಉತ್ಪನ್ನಗಳಿಗೆ ಮೌಲ್ಯವರ್ಧನೆ ಮುಖಾಂತರ ನೇರ ಮಾರುಕಟ್ಟೆ ಕಲ್ಪಿಸಿ ರೈತರನ್ನು ಹೆಚ್ಚು ಸಬಲರನ್ನಾಗಿ ಮಾಡುವುದು ಮತ್ತು ರೈತರ ಆರ್ಥಿಕ ಮಟ್ಟವನ್ನು ಬಲಪಡಿಸುವುದು ಮೇಳದ ಉದ್ದೇಶವಾಗಿದೆ. ಮೇಳದಲ್ಲಿ ಸರಿಸುಮಾರು 15,000 ರೈತರು, ಉದ್ಯಮಿಗಳು ಹಾಗೂ ಹಿತಾಸಕ್ತರು ಭಾಗವಹಿಸಲಿದ್ದು, ಮೇಳದಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ಸ್ಥಾಪನೆಗೊಂಡಿರುವ 100ಕ್ಕೂ ಹೆಚ್ಚು ಎಫ್.ಪಿ.ಓ.ಗಳು ಮಳಿಗೆಗಳನ್ನು ತೆರೆಯಲಿದ್ದು, ವಿವಿಧ ಸಂಸ್ಥೆಯ ಉತ್ಪನ್ನಗಳ ವಸ್ತು ಪ್ರದರ್ಶನ ಮಾಡಲಿದ್ದಾರೆ.

ಸುಮಾರು 400-500ಕ್ಕೂ ಹೆಚ್ಚಿನ ಎಫ್.ಪಿ.ಓ.ಗಳ ಸದಸ್ಯರು, ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮೇಳದ ಪ್ರಯೋಜನ ಪಡೆಯಲಿದ್ದು, ಮೇಳದಲ್ಲಿ ವಿವಿಧ ವಿಚಾರಗೋಷ್ಠಿಗಳನ್ನು ನಡೆಸಲಾಗುವುದು.

ರೈತ ಉತ್ಪಾದಕರ ಸಂಸ್ಥೆಗಳ ಧ್ಯೇಯ, ದೂರದೃಷ್ಟಿ, ಅವಕಾಶಗಳು, ತೊಡಕುಗಳು, ಸಾಮರ್ಥ್ಯ ಬಲವರ್ಧನೆ, ಕಾನೂನು ಅನುಸರಣೆ, ಮಾರಾಟ ಮಾಡುವವರ ಮತ್ತು ಖರೀದಿಸುವವರ ಸಮಾವೇಶ, ಇನ್ನಿತರೆ ವಿ?ಯಗಳ ಬಗ್ಗೆ ಚಿಂತನ-ಮಂಥನ ಸಭೆಯೊಂದಿಗೆ ರೈತರು ಹಾಗೂ ಉದ್ಯಮಿಗಳಿಗೆ ಅನುಕೂಲವಾಗುವಂತೆ ಈ ಮೇಳವನ್ನು ಆಯೋಜಿಸಲಾಗಿದೆ. ರೈತ ಉತ್ಪಾದಕರ ಕಂಪನಿಗಳ ಸದಸ್ಯರು, ರೈತ ಬಾಂಧವರು, ರೈತೋದ್ಯಮಿಗಳು, ಆಸಕ್ತ ನಾಗರಿಕರು ಈ ಮೇಳದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯುವುದರೊಂದಿಗೆ ಮೇಳವನ್ನು ಯಶಸ್ವಿಗೊಳಿಸಬೇಕೆಂದು ರೈತ ಉತ್ಪಾದಕ ಸಂಸ್ಥೆಗಳ ಉತ್ಕೃಷ್ಟ ಕೇಂದ್ರದ ನಿರ್ದೇಶಕ ಡಾ: ರಾಘವೇಂದ್ರ ಕೆ. ಮಾಸ್ತ ಮನವಿ ಮಾಡಿದ್ದಾರೆ.



ತುಮಕೂರುತಾಲೂಕಿನಅರೆಯೂರಿನ ವೈದ್ಯನಾಥೇಶ್ವರ ಸ್ವಾಮಿ ಬ್ರಹ್ಮರಥೋತ್ಸವ ಶಿವರಾತ್ರಿಯಂದು ವಿಜೃಂಭನೆಯಿಂದ ನೆರವೇರಿತು. ಇದರ ಅಂಗವಾಗಿ ವೈದ್ಯನಾಥೇಶ್ವರ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು.ಬ್ರಹ್ಮರಥೋತ್ಸವದಲ್ಲಿ ಸಾವಿರಾರು ಭಾಕ್ತರು ಪಾಲ್ಗೊಂಡುರಥದ ಮೇಲೆ ಬಾಳೆಹಣ್ಣು,ದವನಎಸೆದು ಹರಕೆ ತೀರಿಸಿದರು.ತಹಶೀಲ್ದಾರ್ ಪಿ.ಎಸ್.ರಾಜೇಶ್ವರಿ, ಉಪತಹಶೀಲ್ದಾರ್ ಭೂಮೇಶ್ ನಾಯಕ್, ಕಂದಾಯಾಧಿಕಾರಿ ಎಂ.ಮಂಜುನಾಥ್ ಸೇರಿದಂತೆವಿವಿಧ ಅಧಿಕಾರಿಗಳು, ಸುತ್ತಮುತ್ತಲ ಗ್ರಾಮಸ್ಥರು ಭಾಗವಹಿಸಿದ್ದರು.

# ನಾಳೆ ಜಿ.ಪಂ.ವತಿಯಿಂದ ತರಬೇತಿ ಕಾರ್ಯಕ್ರಮ

ತುಮಕೂರು: ಜಿಲ್ಲಾ ಪಂಚಾಯಿತಿ ವತಿಯಿಂದ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಫೆಬ್ರವರಿ 28ರಂದು ಬೆಳಿಗ್ಗೆ 10–30 ಗಂಟೆಗೆ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನಗರದ ಜಿಲ್ಲಾ ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ತರಬೇತಿ ಕಾರ್ಯಕ್ರಮ ನಡೆಯಲಿದ್ದು, ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಂದರ್ಭದಲ್ಲಿ 2017 ಅಕ್ಟೋಬರ್ 31ರ ಪೂರ್ವದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಮಂಜೂರಾದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿ ಸುತ್ತಿರುವ, ವಿದ್ಯಾರ್ಹತೆ ಹೊಂದಿಲ್ಲದ/ಹೊಂದಿರುವ ಹಾಗೂ ಅನುಕಂಪದ ಆಧಾರದ ಮೇಲೆ ನೇಮಕಗೊಂಡು, ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಯಾಗದೇ ಸೇವೆ ಸಲ್ಲಿಸುತ್ತಿರುವ ಸುಮಾರು 766 ಸಿಬ್ಬಂದಿಗಳಿಗೆ ಅನುಮೋದನಾ ಪತ್ರ ವಿತರಣೆ ಮಾಡಲಾಗುವುದು ಎಂದು ಜಿಲ್ಲಾ ಪಂಚಾಯತಿ ಪ್ರಕಟಣೆ ತಿಳಿಸಿದೆ.

# ತಮ್ಮಡಿಹಳ್ಳಿ ಶ್ರೀ ಪರ್ವತ ಮಲ್ಲಿಕಾರ್ಜುನಸ್ವಾಮಿ ಬೆಟ್ಟಕ್ಕೆ ಬೆಂಕಿ; ಅಪಾರ ಪ್ರಮಾಣದ ಹಾನಿ

ಚಿಕ್ಕನಾಯಕನಹಳ್ಳಿ: ತಾಲ್ಲೂಕಿನ ಪುಣ್ಯಕ್ಷೇತ್ರಗಳಲ್ಲೊಂದಾದ ತಮ್ಮಡಿಹಳ್ಳಿ ಶ್ರೀ ಪರ್ವತ ಮಲ್ಲಿಕಾರ್ಜುನಸ್ವಾಮಿ ಬೆಟ್ಟಕ್ಕೆ ಬೆಂಕಿ ತಗುಲಿ ಅಪಾರ ಪ್ರಮಾಣದ ಅರಣ್ಯ ಹಾಗೂ ಪೈಪ್ಲೈನ್ ಗಳಿಗೆ ಹಾನಿಯಾದ ಘಟನೆ ನಡೆದಿದೆ.



ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿ ಕುಪ್ಪೂರು–ತಮ್ಮಡಿಹಳ್ಳಿಯಲ್ಲಿನ ಶ್ರೀಪರ್ವತ ಮಲ್ಲಿಕಾರ್ಜುನ ಬೆಟ್ಟದ ಸುತ್ತಲಿನ ಕುರುಚಲು ಅರಣ್ಯ ಪ್ರದೇಶಕ್ಕೆ ಮಂಗಳವಾರ ಮದ್ಯಾಹ್ನ 1 ಗಂಟೆಯ ಸಮಯದಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡು ಕ್ಷಣಾರ್ಧದಲ್ಲಿ ಬೆಟ್ಟದ ಸುತ್ತಲೂ ವ್ಯಾಪಿಸಿದೆ.

ಬೆಟ್ಟವು ಸುಮಾರು 100 ಎಕರೆ ವ್ಯಾಪ್ತಿಯ ವಿಸ್ತೀರ್ಣವಿದ್ದು, ಜಾಲಿಗಿರಿ ಮರಗಳ ಬೀಡಾಗಿದೆ, ಇದರ ಜೊತೆಗೆ ಮುತ್ತುಗ ಮತ್ತಿತರ ಕಾಡು ಮರಗಳಿಂದ ಬೆಟ್ಟ ಆವೃತಗೊಂಡಿದ್ದು ಯತೇಚ್ಛವಾಗಿ ದರ್ಬೆ ಹುಲ್ಲಿನ ಬಿಡಾಗಿದೆ. ಬೆಂಕಿಯ ಕೆನ್ನಾಲಿಗೆಯು ಒಣಗಿದ ದರ್ಬೆ ಹುಲ್ಲಿಗೆ ವ್ಯಾಪಿಸಿದ ಕಾರಣ ವೇಗವಾಗಿ ಎಲ್ಲಡೆ ವಿಸ್ತರಣೆಗೊಂಡಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ಹಾಗೂ ಬೆಟ್ಟದ ಕೆಳಭಾಗದಲ್ಲಿನ ವಿರಕ್ತ ಮಠದ ಸಿಬ್ಬಂದಿಗಳು ಬೆಂಕಿ ನಂದಿಸಲು ಯತ್ನಿಸಿದರೂ ಸಫಲವಾಗದ ಕಾರಣ ತಕ್ಷಣ ಅಗ್ನಿಶಾಮಕ ವಾಹನಕ್ಕೆ ಕರೆಮಾಡಿ ಸ್ವಲ್ಪ ಸಮಯದಲ್ಲಿಯೇ ವಾಹನ ಆಗಮಿಸಿ ಸುಮಾರು 2 ಗಂಟೆಗಳ ಕಾಲ ಸಿಬ್ಬಂದಿ ಹರಸಾಹಸದಿಂದ ಬೆಂಕಿಯನ್ನು ನಂದಿಸಲು ಯಶಸ್ವಿಯಾದರು.

ಈ ಅವಘಡದಲ್ಲಿ ಬೆಟ್ಟದ ಸುತ್ತಲಿನ ಸುಮಾರು 50 ಎಕರೆ ವ್ಯಾಪ್ತಿಯ ಕುರುಚಲು ಅರಣ್ಯ ನಾಶವಾಗಿದೆ. ಕೆಳಗಿನ ಮಠದಿಂದ ಬೆಟ್ಟದ ದೇವಾಲಯಕ್ಕೆ ನೀರಿನ ಸೌಲಭ್ಯಕ್ಕೆ ಮಾಡಲಾಗಿದ್ದ ಪೈಪ್ಲೈನ್ ಸಂಪೂರ್ಣವಾಗಿ ಸುಟ್ಟಿದೆ ಹಾಗೂ ವಿದ್ಯುತ್ ತಂತಿಗೂ ಹಾನಿಯಾಗಿದೆ. ಬೆಟ್ಟದ ಕೆಳಗೆ ಇದ್ದ ಮಠಕ್ಕೆ ಸೇರಿದ ಸುಮಾರು 50ಸಾವಿರಕ್ಕೂ ಮಿಗಿಲಾದ ತೆಂಗಿನ ಕಾಯಿಯ ಒಣಮಟ್ಟೆ ಸಂಪೂರ್ಣವಾಗಿ ಸುಟ್ಟು ಹೋಗಿದೆ. ಶಿವರಾತ್ರಿಯ ಪ್ರಯುಕ್ತ ಸ್ವಾಮಿ ಸನ್ನಿದಿಯಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಹಿಂದಿನ ದಿನವೇ ಈ ಬೆಂಕಿ ಅವಘಡ ಸಂಭವಿಸಿರುವುದು ಆತಂಕಕ್ಕೆ ಕಾರಣವಾಗಿದೆ.

# ಸುಡು ಬಿಸಿಲಿನಲ್ಲೂ ಸರತಿಯಲ್ಲಿ ನಿಂತು ಭಕ್ತರಿಂದ ಶಿವ ದರ್ಶನ



ಹುಳಿಯಾರು: ಮಹಾಶಿವರಾತ್ರಿ ಅಂಗವಾಗಿ ಭಕ್ತರು ಶಿವನ ಆರಾಧನೆಯಲ್ಲಿ ತಲ್ಲೀನರಾಗಿದ್ದರು. ಪಟ್ಟಣ ಸೇರಿದಂತೆ ಅಕ್ಕಪಕ್ಕದ ಶಿವ ದೇವಸ್ಥಾನಗಳಲ್ಲಿ ಹಬ್ಬದ ಸಡಗರ ಮನೆ ಮಾಡಿತ್ತು ಹುಳಿಯಾರಿನ ಐತಿಹಾಸಿಕ ಶ್ರೀ ಮಲ್ಲೇಶ್ವರ ಸ್ವಾಮಿ ದೇವಾಲಯದಲ್ಲಿ ಸುಡು ಬಿಸಿಲಿನಲ್ಲಿ ಸರತಿ ಸಾಲಿನಲ್ಲಿ ನಿಂತು ಶಿವದರ್ಶನ ಪಡೆಯುವ ಮೂಲಕ ಶಿವಭಕ್ತರು ಶ್ರದ್ದಾಭಕ್ತಿಯಿಂದ ಶಿವರಾತ್ರಿ ಆಚರಿಸಿದರು.

ಮಲ್ಲೇಶ್ವರ ಸ್ವಾಮಿ ದೇವಾಲಯದಲ್ಲಿ ಮುಂಜಾನೆಯಿಂದಲೇ ಈಶ್ವರನಿಗೆ ಅರ್ಚನೆ ಅಭಿಷೇಕ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ನೆರವೇರಿದ್ದು, ಶಿವರಾತ್ರಿ ಹಿನ್ನೆಲೆಯಲ್ಲಿ ಉಪವಾಸ ಆಚರಿಸಿರುವ ಭಕ್ತರು ಮುಂಜಾನೆ ಯಿಂದಲೇ ಶಿವ ದರ್ಶನ ಪಡೆಯಲು ಸರತಿ ಸಾಲಿನಲ್ಲಿ ನಿಂತಿದ್ದು, ಮಧ್ಯಾಹ್ನ ವಾದರೂ ಸಹ ಜನ ದೇವಾಲಯಕ್ಕೆ ಆಗಮಿಸುತ್ತಲೇ ಇದ್ದರು.

ಉಪವಾಸವಿರುವ ಭಕ್ತರು ಶಿವನಾಮ ಸ್ಮರಣೆ ಮಾಡಿ ಜಾಗರಣೆಗೆ ವ್ಯವಸ್ಥೆ ಕಲ್ಪಿಸಲಾಗಿತ್ತು. ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು, ಶಿವನ ಕುರಿತಾದ ನೃತ್ಯಗಳ ಪ್ರದರ್ಶನ ಏರ್ಪಡಿಸಲಾಗಿತ್ತು. ಮಲ್ಲೇಶ್ವರನ ದರ್ಶನಕ್ಕೆ ಬರುತ್ತಿರುವ ಭಕ್ತರು ಸ್ವಾಮಿಗೆ ಬಿಲ್ವಪತ್ರೆ–ಎಳನೀರು– ಹಣ್ಣುಕಾಯಿ ಅರ್ಪಿಸಿ ಪ್ರಾರ್ಥನೆ ಸಲ್ಲಿಸುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಶಿವರಾತ್ರಿ ಅಂಗವಾಗಿ ಶ್ರೀ ಪ್ರಸನ್ನ ಗಣಪತಿ ಹಾಗೂ ಶ್ರೀ ಆಚಿಜನೇಯಸ್ವಾಮಿಗೆ ವಿಶೇಷ ಬೆಣ್ಣೆ ಅಲಂಕಾರ ಮಾಡಲಾಗಿತ್ತು. ಯಳನಾಡು ಶ್ರೀ ರಾಜಯೋಗಿ ಗುರುಸಿದ್ಧರಾಮರಿಗೆ ರುದ್ರಾಕ್ಷಿ ಅಲಂಕಾರ ಮಾಡಲಾಗಿತ್ತು. ಕೆರೆಸೂರಗೊಂಡನಹಳ್ಳಿ ಶ್ರೀ ಮಲ್ಲಿಕಾರ್ಜುನಸ್ವಾಮಿ ಹಾಗೂ ಜೋಡಿ ತಿಮ್ಲಾಪುರ ಚಂದ್ರಮೌಳೇಶ್ವರ ಸ್ವಾಮಿಯವರಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಹೋಬಳಿಯ ಗಾಣಧಾಳು ಶಿವಲಿಂಗಕ್ಕೆ ರುದ್ರಾಕ್ಷಿ ಅಲಂಕಾರ ಮಾಡಲಾಗಿತ್ತು. ಎಲ್ಲಡೆಯೂ ಶಿವರಾತ್ರಿ ಸಂಭ್ರಮ ಮನೆ ಮಾಡಿತ್ತು. ಎಲ್ಲಾ ದೇವಾಲಯಗಳಲ್ಲೂ ಬೆಳಿಗ್ಗೆಯಿಂದಲೇ ಭಕ್ತರು ತೆರಳಿ ಹಣ್ಣುಕಾಯಿ ಮಾಡಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.



ತುಮಕೂರಿನ ರೈಲ್ವೆ ನಿಲ್ದಾಣದ ಕಡೆಯಿಂದ ಗಾಂಧಿನಗರಕ್ಕೆ ಹೋಗುವ ರಸ್ತೆಯಲ್ಲಿರುವ ಟೆಕೊವಾ ಮರ ಹಳದಿ ಬಣ್ಣದ ಹೂವುಗಳಿಂದ ಕಂಗೊಳಿಸುತ್ತಿದ್ದು, ನೋಡುಗರ ಗಮನ ಸೆಳೆಯುತ್ತಿದೆ.




ವ್ಯವಸಾಯ ಸೇವಾ ಸಹಕಾರ ಸಂಘ ನಿಯಮಿತ ದೇವಲಾಪುರ ತುಮಕೂರು ತಾಲೂಕು ಕೋರ ಹೋಬಳಿಯಲ್ಲಿ ನಡೆದ ನೂತನ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಕೃಷ್ಣಪ್ಪ ಉಪಾಧ್ಯಕ್ಷರಾಗಿ ದಾಸಪ್ಪ ಆಯ್ಕೆಯಾದರು ನೂತನ ನಿರ್ದೇಶಕರಾದ ಜಯ ನುಡಿ ಜಯಣ್ಣ ಮತ್ತು ಬಿಎಸ್ ನಾರಾಯಣಪ್ಪ ಶ್ರೀರಂಗಪ್ಪ ಶ್ರೀಮತಿ ಕುಷ್ಟರು ನಿಸಾ ನಟರಾಜು ರಘುನಾಥ ದೊರೆಸ್ವಾಮಿ ರವಿ ನಿರ್ಗಮಿತ ಅಧ್ಯಕ್ಷ ಬಿ ಸಿ ದಯಾನಂದ ಸಿಇಒ ಹನುಮಂತ್ ರಾಯಪ್ಪ ಸಹಾಯಕ ಅಂಜಿನಪ್ಪ ಮುಂತಾದವರು ಭಾಗವಹಿಸಿದ್ದರು.

# ರೈತರ ದರೋಡೆ ಮಾಡಿದ್ದ ಐವರು ಕಂಬಿ ಹಿಂದೆ

ತುಮಕೂರು: ನಗರ ಹೊರವಲಯದ ರಿಂಗ್ ರಸ್ತೆಯಲ್ಲಿ ಟೊಮೆಟೊ ಸಾಗಣೆ ಮಾಡುತ್ತಿದ್ದ ರೈತರನ್ನು ದರೋಡೆ ಮಾಡಿದ್ದ ಆರೋಪಿಗಳನ್ನು ತಿಲಕ್‌ಪಾರ್ಕ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಗಂಗಸಂದ್ರದ ಬಳಿ ಭಾನುವಾರ ರಾತ್ರಿ ದರೋಡೆಗೆ ಹೊಂಚು ಹಾಕಿ ಕುಳಿತಿದ್ದ ಸಮಯದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ ಬಂಧಿಸಿದ್ದಾರೆ.

ಠಾಣೆಗೆ ಕರೆತಂದು ವಿಚಾರಣೆ ನಡೆಸಿದಾಗ ರೈತರ ದರೋಡೆ ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ಭಾಗಿಯಾದ ಬಗ್ಗೆ ಬಾಯಿ ಬಿಟ್ಟಿದ್ದಾರೆ.

ಡಕಾಯಿತಿ, ಕಳ್ಳತನ ಮಾಡುತ್ತಿದ್ದ ನಗರದ ಹೆಗಡೆ ಕಾಲೊನಿ, ಪಿ.ಎಚ್.ಕಾಲೊನಿಗೆ ಸೇರಿದ ಅಬ್ದುಲ್ ಖಾದರ್ (38), ಫಯಾಜ್ (22), ಮಂಜುನಾಥ್ (21), ಅಫ್ರೋಜ್ (22), ಸುಹೇಲ್ (24) ಬಂಧಿತರು. ಬೈಕ್, ಮೊಬೈಲ್ ಜಪ್ತಿ ಮಾಡಿದ್ದಾರೆ. ಮತ್ತೊಬ್ಬ ತಪ್ಪಿಸಿಕೊಂಡು ಪರಾರಿಯಾಗಿದ್ದಾನೆ.

ನಗರ ಹೊರವಲಯದ ರಿಂಗ್ ರಸ್ತೆಯಲ್ಲಿ ಫೆ. 19ರಂದು ಮಧ್ಯರಾತ್ರಿ ಫಯಾಜ್, ಮಂಜುನಾಥ್, ಅಫ್ರೋಜ್ ಇತರರು ಟೊಮೆಟೊ ಬೆಳೆಗಾರರಿಗೆ ಚಾಕುವಿನಿಂದ ಇರಿದು ಚಿನ್ನಾಭರಣ, ನಗದು ದೋಚಿದ್ದರು. ಅರಸೀಕೆರೆಯಿಂದ ಬೆಂಗಳೂರಿಗೆ ಹೋಗುವವರನ್ನು ಚಾಕುವಿನಿಂದ ಬೆದರಿಸಿದ್ದರು. ಹಣ ಕೊಡಲು ಒಪ್ಪದಿದ್ದಾಗ ಚಾಕುವಿನಿಂದ ಇರಿದಿದ್ದರು. ಜಯನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆರೋಪಿಗಳ ಪತ್ತೆಗೆ ಪ್ರಯತ್ನ ಮುಂದುವರಿದ ಸಮಯದಲ್ಲೇ ಬೇರೊಂದು ಪ್ರಕರಣದಲ್ಲಿ ಮೂವರು ಸಿಕ್ಕಿ ಬಿದ್ದಿದ್ದಾರೆ.

# ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳಿಗೆ ಮಕ್ಕಳ ಆಯೋಗದ ಮೆಚ್ಚುಗೆ

ವಿದ್ಯುತ್ ಅವಘಡಗಳಿಂದ ಮಕ್ಕಳ ಸಾವನ್ನಪ್ಪುತ್ತಿರುವ ಹಾಗೂ ಅಪಘಾತಕ್ಕೆ ಒಳಗಾಗುತ್ತಿರುವ ಪ್ರಕರಣಗಳು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಲ್ಲಿ ದಾಖಲಾಗುತ್ತಿವೆ, ತುಮಕೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ 6 ಮಕ್ಕಳು ವಿದ್ಯುತ್ ಅವಘಡಗಳಿಂದ ಸಾವನ್ನಪ್ಪಿದ್ದರೆ 4 ಮಕ್ಕಳು ವಿದ್ಯುತ್ ಅಪಘಾತಕ್ಕೆ ಒಳಗಾಗಿದ್ದಾರೆ. ಇದನ್ನು ಗಂಭೀರವಾಗಿ ಪರಿಗಣಿಸಿದ್ದ ಆಯೋಗವು ಕೆಲವು ಪ್ರಕರಣಗಳಲ್ಲಿ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ವಿಚಾರಣೆ ನಡೆಸಿ ಮಕ್ಕಳ ಸುರಕ್ಷತೆಗೆ ತುರ್ತಾಗಿ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿತ್ತು. ಶಾಲೆ, ಅಂಗನವಾಡಿ ಹಾಗೂ ವಸತಿ ನಿಲಯಗಳ ಆವರಣಗಳಿಂದ ವಿದ್ಯುತ್ ತಂತಿ, ಟ್ರಾನ್ಸ್ ಪಾರ್ಮರ್ ಗಳನ್ನು ತೆರವುಗೊಳಿಸಲು ಮತ್ತು ಸ್ಥಳಾಂತರಿಸಲು ಬೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶನ ನೀಡಿತ್ತು. ಈ ಸಂಬಂಧ ಕೈಗೊಂಡ ಕ್ರಮಗಳ ಬಗ್ಗೆ ತುಮಕೂರಿನ ಅಧೀಕ್ಷಕ ಇಂಜಿನಿಯರ್ ರವರ ಕಛೇರಿಯಲ್ಲಿ ತುಮಕೂರು ಜಿಲ್ಲೆಯ ಬೆಸ್ಕಾಂ ಮತ್ತು ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳ ಜೊತೆಗೆ ಅಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.



ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ತುಮಕೂರು, ಕುಣಿಗಲ್, ತಿಪಟೂರು ಹಾಗೂ ಮಧುಗಿರಿ ವಿಭಾಗಗಳಲ್ಲಿ ಮಾರ್ಚ 2024ರ ಅಂತ್ಯದ ವೇಳೆಗೆ? ಒಟ್ಟು 1183 ಶಾಲೆ, ಅಂಗನವಾಡಿ ಹಾಗೂ ವಸತಿ ನಿಲಯಗಳ ಆವರಣಗಳಿಂದ ವಿದ್ಯುತ್ ತಂತಿ, ಟ್ರಾನ್ಸ್ ಪಾರ್ಮರ್‌ಗಳನ್ನು ತೆರವುಗೊಳಿಸಿದ ಬಗ್ಗೆ ವರದಿ ನೀಡಿದರು. ಸಾವನ್ನಪ್ಪಿದ 6 ಮಕ್ಕಳ ಕುಟುಂಬಕ್ಕೆ ಒಟ್ಟು 29ಲಕ್ಷ ಪರಿಹಾರ ವಿತರಣೆ ಮಾಡಿರುವ ಮಾಹಿತಿ ನೀಡಿದರು. ಅಪಘಾತಕ್ಕೆ ಒಳಗಾಗಿ ಪರಿಹಾರಕ್ಕೆ ಅರ್ಹವಾದ 4 ಪ್ರಕರಣಗಳಲ್ಲಿ ಇನ್ನೂ ಪರಿಹಾರ ವಿತರಣೆಯಾಗಿಲ್ಲದಿರುವುದನ್ನು ಗಮನಿಸಿದ ಸದಸ್ಯರು ಶೀಘ್ರವೇ ಪರಿಹಾರ ವಿತರಿಸಲು ಸೂಚಿಸಿದರು. ಈ ಪ್ರಕರಣಗಳಲ್ಲಿ ಸಕಾಲದಲ್ಲಿ ವರದಿ ನೀಡದೆ ಪರಿಹಾರ ವಿತರಣೆಯ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲು ಸೂಚಿಸಿದರು.

ತೆರವು ಕಾರ್ಯಾಚರಣೆಯ ಜೊತೆಯಲ್ಲೇ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ವಿದ್ಯುತ್ ಅವಘಡಗಳ ಬಗ್ಗೆ, ವಹಿಸಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಜುಲೈ ತಿಂಗಳಲ್ಲಿ ಇಡೀ ಜಿಲ್ಲೆಯಾದ್ಯಂತ ಆಂದೋಲನ ಮಾದರಿಯಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲು ಸೂಚಿಸಿದರು. ಹಾಗೆಯೆ ಶಾಲೆಗಳಿಗೆ ಮಾನ್ಯತೆ ನವೀಕರಣ ಮಾಡುವ ಸಮಯದಲ್ಲಿ ಸುರಕ್ಷಿತವಲ್ಲದ ಸ್ಥಳಗಳಲ್ಲಿ ಕಟ್ಟಡಗಳನ್ನು ನಿರ್ಮಿಸಿರುವ ಶಾಲೆಗಳ ಮಾನ್ಯತೆಯನ್ನು ತಡೆಹಿಡಿಯುವ ಮೂಲಕ ಮಕ್ಕಳ ಸುರಕ್ಷತೆಗೆ ಆದ್ಯತೆ ವಹಿಸಬೇಕಿದೆ, ಈ ಬಗ್ಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದರು.

ಒಟ್ಟಾರೆ ಕಳೆದು ನಾಲ್ಕು ವರ್ಷದಲ್ಲಿ ತುಮಕೂರು ಜಿಲ್ಲೆಯಲ್ಲಿ ಸುಮಾರು 71 ಕೋಟಿ ವೆಚ್ಚದಲ್ಲಿ 1183 ಶಾಲೆ, ಅಂಗನವಾಡಿ ಹಾಗೂ ವಸತಿ ನಿಲಯಗಳ ಆವರಣಗಳಿಂದ ವಿದ್ಯುತ್ ತಂತಿ, ಟ್ರಾನ್ಸ್ ಪಾರ್ಮರ್ ಗಳನ್ನು ತೆರವುಗೊಳಿಸುವ ಮತ್ತು ಸ್ಥಳಾಂತರ ಪ್ರಕ್ರಿಯೆ ನಿರೀಕ್ಷೆ ಮೀರಿ ಚುರುಕಾಗಿ ನಡೆದಿದ್ದು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಅದಕ್ಕಾಗಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಜಿಲ್ಲೆಯ ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳನ್ನು ಅಭಿನಂದಿಸುತ್ತದೆ ಎಂದರು. ಮುಂದೆ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದರು.

ಸಭೆಯಲ್ಲಿ ಬೆಸ್ಕಾಂ ತುಮಕೂರು ವೃತ್ತದ ಅಧೀಕ್ಷಕ ಇಂಜಿನಿಯರ್ ಶ್ರೀ ನರಸಿಂಹಮೂರ್ತಿ, ಕೆಪಿಟಿಸಿಎಲ್ ನ ಅಧೀಕ್ಷಕ ಇಂಜಿನಿಯರ್ ಶ್ರೀಮತಿ ಕಾಂತಲಕ್ಷ್ಮಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀ ದಿನೇಶ್, ಕಾರ್ಯನಿರ್ವಹಕ ಇಂಜಿನಿಯರ್ ಗಳಾದ ಶ್ರೀ ಪ್ರಶಾಂತ್ ಹಾಗೂ ಶ್ರೀಮತಿ ಸಂಧ್ಯಾ, ಮಕ್ಕಳ ರಕ್ಷಣಾಧಿಕಾರಿ ಶ್ರೀ ಶಿವಣ್ಣ, ಬೆಸ್ಕಾಂನ ಎಲ್ಲಾ ವಿಭಾಗಳ ಕಾರ್ಯಪಾಲಕ ಇಂಜಿನಿಯರ್ ಗಳು, ಕೆಪಿಟಿಸಿಎಲ್ ನ ವಿವಿಧ ಹಂತದ ಅಧಿಕಾರಿಗಳು ಭಾಗವಹಿಸಿದ್ದರು

# ಶ್ರೀ ಪ್ರತ್ಯಂಗಿರಾ ದೇವಸ್ಥಾನದಲ್ಲಿ ಇಂದು ಸಂಜೆ ಲೋಕಕಲ್ಯಾಣಾರ್ಥವಾಗಿ ಹೋಮ; ಬಸವರಾಜ ಶಾಸ್ತ್ರಿ



ಶಿರಾ ತಾಲೂಕು ಯಲಿಯೂರು ಗ್ರಾಮದಲ್ಲಿರುವ ಶ್ರೀ ಕ್ಷೇತ್ರ ಲಕ್ಷ್ಮಿ ಪ್ರತ್ಯಂಗಿರಾ ದೇವಿ ದೇವಾಲಯದಲ್ಲಿ ಫೆ. 27ರ ಗುರುವಾರ ಅಮಾವಾಸ್ಯೆ ಪ್ರಯುಕ್ತ ಲೋಕಕಲ್ಯಾಣಾರ್ಥವಾಗಿ ಸಂಜೆ 5.30 ಪ್ರತ್ಯಂಗಿರಾ ದೇವಿ ಹೋಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಧರ್ಮದರ್ಶಿಗಳಾದ ಬಸವರಾಜ ಶಾಸ್ತ್ರಿ ತಿಳಿಸಿದರು.

ಅವರು ಯಲಿಯೂರಿನ ಶ್ರೀ ಪ್ರತ್ಯಂಗಿರಾ ದೇವಿ ದೇವಸ್ಥಾನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು. ಶ್ರೀ ಪ್ರತ್ಯಂಗಿರಾ ದೇವಿ ದೇವಸ್ಥಾನದಲ್ಲಿ ಅಮಾವಾಸ್ಯೆಯಂದು ಮೆಣಸಿನ ಕಾಯಿ, 108 ಗಿಡಮೂಲಿಯುಳ್ಳ ದ್ರವ್ಯಗಳು ಹಾಗೂ ಒಂದು ತೆಂಗಿನ ಕಾಯಿಗೆ ವಿಶೇಷ ಪೂಜೆ ಸಲ್ಲಿಸಿ ಪೂರ್ಣಾಹುತಿ ರೂಪದಲ್ಲಿ ಸಲ್ಲಿಸಿದರೆ ತಮ್ಮ ಸಮಸ್ಯೆಗಳು ನಿವಾರಣೆಯಾಗುತ್ತವೆ. ಇಲ್ಲಿಗೆ ಬಂದಂತಹ ಎಲ್ಲಾ ಭಕ್ತರಿಗೂ ಉಚಿತವಾಗಿ ಶ್ರೀ ಪ್ರತ್ಯಂಗಿರಾ ದೇವಿನ ಭಾವಚಿತ್ರವನ್ನು ನೀಡಲಾಗುವುದು ಭಕ್ತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿಯ ಆಶೀರ್ವಾದ ಪಡೆಯಬೇಕೆಂದು ಮನವಿ ಮಾಡಿದ್ದಾರೆ.

# ಅಸಮರ್ಪಕ ವಿದ್ಯುತ್ ಪೂರೈಕೆ ಖಂಡಿಸಿ ರೈತರ ಪ್ರತಿಭಟನೆ



ಶಿರಾ: ತಾಲ್ಲೂಕಿನ ಬುಕ್ಕಾಪಟ್ಟಣ ಹೋಬಳಿಯ ಬೆಸ್ಕಾಂ ಅಧಿಕಾರಿಗಳು ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ. ಬೆಳೆಗಳು ಒಣಗುತ್ತಿದ್ದರು ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಬೆಸ್ಕಾಂ ಕಚೇರಿ ಮುಂದೆ ರೈತರು ಪ್ರತಿಭಟನೆ ನಡೆಸಿದರು.

ಬುಕ್ಕಾಪಟ್ಟಣ ಹೋಬಳಿಯ ಮಂಗನಹಳ್ಳಿ, ಕಂಬದಹಳ್ಳಿ, ಹುಯಿಲ್ ದೊರೆ, ರಂಗನಾಥಪುರ, ಬುಕ್ಕಾಪಟ್ಟಣ ಸೇರಿದಂತೆ ಅಕ್ಕಪಕ್ಕದ ಗ್ರಾಮಸ್ಥರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಅಡಿಕೆ ಗಿಡ ಉಳಿಸಿಕೊಳ್ಳಲಾಗದೆ ಕಣ್ಣೆದುರಿಗೆ ಬೆಳೆ ಒಣಗುತ್ತಿದೆ. ಓವರ್ ಲೋಡಿಂಗ್ ನೆಪಒಡ್ಡಿ ದಿನದಲ್ಲಿ ಕೇವಲ ಅರ್ಧ ಗಂಟೆ ಮಾತ್ರ ಕರೆಂಟ್ ನೀಡಲಾಗುತ್ತಿದೆ. ಬಿಸಿಲಿಗೆ ಬೆಳೆ ಒಣಗುತ್ತಿವೆ. ಬೆಳೆ ಉಳಿಸಿಕೊಳ್ಳಲು ಹರಸಾಹಸ ಪಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಶ್ರೀನಿವಾಸ್ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.

## ರೈತರ ಮೂಗಿಗೆ ತುಪ್ಪ ಸವರುವ ಕೆಲಸ ಬಿಟ್ಟು ತ್ರೀಫೇಸ್ ವಿದ್ಯುತ್ ನೀಡುವಂತೆ ಆಗ್ರಹ

# ತೋಟದ ಮನೆಗಳ ರೈತರಿಂದ ಬೆಸ್ಕಾಂ ವಿರುದ್ಧ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ



ತಿಪಟೂರು : ತಾಲೂಕಿನ ಬಹುತೇಕ ತೋಟದ ಮನೆಗಳಿಗೆ ಕಳೆದ ಒಂದೆರಡು ತಿಂಗಳಿಂದಲೂ ವಿದ್ಯುತ್ ಇಲ್ಲದೆ ಪರಿತಪಿಸುವಂತಾಗಿದ್ದು ಇದಕ್ಕೆ ಬೆಸ್ಕಾಂ ಇಲಾಖೆಯ ನಿರ್ಲಕ್ಷ್ಯವೇ ಕಾರಣ ಎಂದು ತೋಟದ ಮನೆಗಳ ತಾಲ್ಲೂಕು ಹಿತರಕ್ಷಣಾ ಸಮಿತಿ ವತಿಯಿಂದ ಸೋಮವಾರ ನಗರದ ಬೆಸ್ಕಾಂ ಕಚೇರಿ ಮುಂಭಾಗ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿತ್ತು.

ತೋಟದ ಮನೆಗಳ ಹಿತರಕ್ಷಣಾ ಸಮಿತಿ ಸಂಚಾಲಕ ವಿನಯ್ ಮಡೇನೂರು ಮಾತನಾಡಿ ಕಳೆದ ಹತ್ತು ದಿನಗಳ ಹಿಂದೆ ಬೆಸ್ಕಾಂ ಇಲಾಖೆ ಮುಂದೆ ನೂರಾರು ರೈತರು ಸಮರ್ಪಕ ವಿದ್ಯುತ್ ನೀಡಬೇಕೆಂದು ಪ್ರತಿಭಟನೆ ನಡೆಸಲಾಗಿತ್ತು. ಸ್ಥಳಕ್ಕೆ ಬಂದಿದ್ದ ಬೆಸ್ಕಾಂ ಅಧಿಕಾರಿಗಳು ನಮಗೆ ಒಂದು ವಾರ ಸಮಯ ಕೊಡಿ. ತೋಟದ ಮನೆಗಳಿಗೆ ಸಮರ್ಪಕವಾಗಿ ವಿದ್ಯುತ್ ಕೊಡುತ್ತೇವೆಂದು ಭರವಸೆ ನೀಡಿದ ಕಾರಣ ನಾವು ಪ್ರತಿಭಟನೆಯನ್ನು ಮುಂದುವರಿಸದೆ ಅಧಿಕಾರಿಗಳ ಮಾತಿಗೆ ಬೆಲೆಕೊಟ್ಟು ಹೋದೆವು. ಆದರೆ ಕೊಟ್ಟ ಸಮಯ ಮುಗಿದರೂ ನಮ್ಮ ವಿದ್ಯುತ್ ಸಮಸ್ಯೆಗೆ ಪರಿಹಾರ ಸಿಗಲಿಲ್ಲ. ತೋಟದ ಮನೆಗಳಲ್ಲಿ ಸಂಜೆ 6 ಗಂಟೆಯಿಂದ ಬೆಳಿಗ್ಗೆ 6 ಗಂಟೆಯ ವರೆಗೂ ವಿದ್ಯುತ್ ಇರುವುದಿಲ್ಲ. ಅಸಮರ್ಪಕ ವಿದ್ಯುತ್ ಸರಬರಾಜಿನಿಂದ ತೋಟದ ಮನೆಗಳ ಹತ್ತಿರ ಮೋಟರ್, ಪಂಪ್‌ಸೆಟ್, ಕೇಬಲ್ ಕಳ್ಳತನ ಮತ್ತು ಚಿರತೆ ಕಾಟ ಹೆಚ್ಚಾಗಿದ್ದು ಭಯದ ವಾತಾವರಣದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ಪ್ರತಿನಿತ್ಯ ಕತ್ತಲೆಯಲ್ಲಿ ಕಾಲ ಕಳೆಯುವಂತಾಗಿದ್ದು ನಮ್ಮ ವಿದ್ಯುತ್ ನಮ್ಮ ಹಕ್ಕಾಗಿದ್ದು ಅಧಿಕಾರಿಗಳು ರೈತರ ಮೂಗಿಗೆ ತುಪ್ಪ ಸವರುವ ಕೆಲಸಬಿಟ್ಟು ಮೊದಲಿನಂತೆ ನಿಗದಿತ ಸಮಯದಲ್ಲಿ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಕೊಡುವಂತೆ ಆಗ್ರಹಿಸಿದ ಅವರು ಕಳೆದ 2–3 ವರ್ಷಗಳಿಂದ ವಿದ್ಯುತ್ ಪರಿವರ್ತಕಗಳಿಗೆ ಹಣ ಕಟ್ಟಿರುವುದನ್ನು ತಕ್ಷಣ ಪರಿಗಣಿಸಿ ಪರಿವರ್ತಕ ನೀಡಬೇಕು. ತೋಟದ ಮನೆಗಳಿಗೆ ನಿರಂತರ ವಿದ್ಯುತ್ ನೀಡಬೇಕು. ಅಕ್ರಮ–ಸಕ್ರಮ ಯೋಜನೆಡಿಯಲ್ಲಿ ರೈತರಿಗೆ ವಿದ್ಯುತ್ ಪರಿವರ್ತಕ ಒದಗಿಸಬೇಕು. ರೈತರ ಪರಿರ್ತಕಗಳು ಸುಟ್ಟುಹೋದ ಹೋದಾಗ ಅವರನ್ನು ಅಲೆದಾಡಿಸದೆ, ಲಂಚ ಸ್ವೀಕರಿಸಿ ಎರಡು ದಿನಗಳೊಳಗೆ ಪರಿರ್ತಕಗಳನ್ನು ನೀಡಬೇಕು, ರೈತರ ಸ್ಟಾರ್ಟರ್, ಮೋಟರ್, ಕೇಬಲ್ ಕಳ್ಳತನವಾಗುತ್ತಿದ್ದು ಕೂಡಲೆ ಪೊಲೀಸರು ಕಳ್ಳರನ್ನು ಬಂಧಿಸಿ ರೈತರ ಕಷ್ಟಕ್ಕೆ ಸ್ಪಂಧಿಸಬೇಕು ಎಂದು ಆಗ್ರಹಿಸಿ ಎಇಇರವರಿಗೆ ಮನವಿ ಪತ್ರ ಸಲ್ಲಿಸಿದರು. ರೈತರಾದ ಮಲ್ಲೇನಹಳ್ಳಿ ಮುರುಳೀಧರ್ ಮತ್ತು ಆರ್.ಎಸ್. ನವೀನ್ ಮಾತನಾಡಿ, ವಿದ್ಯುತ್ ಕಣ್ಣಾಮುಚ್ಚಾಲೆಯಾಟ ದಿಂದ ರೈತರ ಪಾಡು ಹೇಳತೀರದಾಗಿದೆ. ಬೆಳೆದ ಬೆಳೆಗಳು ನೀರಿಲ್ಲದೆ ಒಣಗುತ್ತಿವೆ ಈ ವರ್ಷ ನಮಗೆ ಸಮರ್ಪಕ ಮಳೆ ಇದ್ದರೂ ವಿದ್ಯುತ್ ಅಭಾವ ಹೆಚ್ಚಾಗುತ್ತಿದೆ. ತೋಟದ ಮನೆಗಳಿಗೆ ನಿರಂತರ ವಿದ್ಯುತ್ ಸಂಪರ್ಕ ನಿಡಬೇಕು. ಗ್ರಾಮೀಣ ಭಾಗದಲ್ಲಿ ವಿದ್ಯುತ್ ಕಂಬಗಳು, ತಂತಿಗಳು ಹಳೆಯದಾಗಿದ್ದು ನಮಗೆ ಬದಲಾವಣೆ ಮಾಡಿಕೊಡಿ ಎಂದು ಒತ್ತಾಯಿಸಿದರು. ಸ್ಥಳಕ್ಕೆ ಆಗಮಿಸಿದ ಬೆಸ್ಕಾಂ ಎಇಇ ಮನೋಹರ್ ಮಾತನಾಡಿ, ಸರ್ಕಾರ ತೋಟದ ಮನೆಗಳಿಗೆ ಅನುಗುಣವಾಗಿ ವಿದ್ಯುತ್ ನೀಡುವಂತೆ ಅದೇಶ ನೀಡಿದ್ದು ಅದರಂತೆ ವಿದ್ಯುತ್ ನೀಡುತ್ತಿದ್ದೇವೆ. ಆದರೆ ಕೆಲ ರೈತರು ಸಿಂಗಲ್ ಫೇಸ್‌ಗೆ ಕಂಡೆನ್ಸರ್ ಸಹಿತ ಆಟೋಸ್ಟಾರ್ಟರ್ ಗಳನ್ನು ಅಳವಡಿಸಿಕೊಂಡು ಮೋಟಾರ್‌ಗಳನ್ನು ಚಾಲನೆ ಮಾಡುತ್ತಿರುವುದರಿಂದ ಓವರ್‌ಲೋಡ್ ಆಗಿ ಟ್ರಿಪ್ ಆಗಿ ಮನೆಗಳ ವಿದ್ಯುತ್ ಸಂಪರ್ಕಕ್ಕೆ ತೊಂದರೆಯಾಗು ತ್ತಿದ್ದು ರೈತರೇ ಇದನ್ನು ಸರಿಪಡಿಸಿ ಕೊಂಡರೆ ವಿದ್ಯುತ್ ಅಭಾವ ವಾಗು ವುದಿಲ್ಲ. ಹಳೆಯ ವಿದ್ಯುತ್ ಕಂಬಗಳು ಹಾಗೂ ಲೈನ್‌ಗಳನ್ನು ದುರಸ್ಥಿತಿ ಗೊಳಿಸಲಾಗುವು ದು. ಯಾವ ಭಾಗದಲ್ಲಿ ಲೈನ್‌ಮನ್‌ಗಳು ಸರಿಯಾಗಿ ಕಾರ್ಯ ನಿರ್ವಹಿಸದಿದ್ದರೆ ನಮ್ಮ ಗಮನಕ್ಕೆ ತರಬಹುದು ಎಂದರು. ಪ್ರತಿಭಟನೆಯಲ್ಲಿ ರೇಣುಕಾರಾಧ್ಯ, ಬಸವರಾಜು, ಶಿವ ಕುಮಾರ್, ತಿಲಕ್, ಚೇತನ್, ಅರುಣ್ ಕುಮಾರ್, ಗೌಡನಕಟ್ಟೆ ಮನೋಜ್, ನಾಗೇಶ್ ಸೇರಿದಂತೆ ಗೌಡನಕಟ್ಟೆ, ಸೂಗೂರು, ಮಡೇನೂರು ಸೇರಿದಂತೆ ಸಾಕಷ್ಟು ಗ್ರಾಮಗಳ ರೈತರು ಭಾಗವಹಿಸಿದ್ದರು.

# ಕರ್ನಾಟಕ ಅಥ್ಲೆಟಿಕ್ ಅಸೋಸಿಯೇಷನ್ ಕಛೇರಿ ಉದ್ಘಾಟನೆ



ತುಮಕೂರು: ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿನ ನೂತನ ಕಾರ್ಯಾಲಯವನ್ನು ಕರ್ನಾಟಕ ಅಥ್ಲೆಟಿಕ್ ಅಸೋಸಿಯೇಷನ್ (ಕೆಎಎ) ಅಧ್ಯಕ್ಷರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಉದ್ಘಾಟಿಸಿದರು.

ಜಿ.ಪರಮೇಶ್ವರ್ ಕ್ರೀಡಾಂಗಣದ ಮೊದಲ ಅಂತಸ್ತಿನಲ್ಲಿನ ನವೀಕೃತ ಕೆಎಎ ಅಧ್ಯಕ್ಷರ ಕಚೇರಿಯನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಸ್ಮಾರ್ಟ್‌ಸಿಟಿ ಯೋಜನೆ ಅಡಿ 54.56 ಕೋ.ರೂ., ಹಾಗೂ ಸಿಂಥೆಟಿಕ್ ಟ್ರ್ಯಾಕ್ ಅನ್ನು 4 ಕೋ.ರೂ., ವೆಚ್ಚದಲ್ಲಿ ಅಳವಡಿಸಿ ನಿರ್ಮಿಸಿರುವ ಸುಸಜ್ಜಿತ ಕ್ರೀಡಾಂಗಣ ನಿರ್ವಹಣೆಗೆ ಪೇ ಆ?ಯಂಡ್ ಪ್ಲೇ (ಕ್ರೀಡಾಂಗಣ ಬಳಕೆ ನೀತಿ) ಯೋಜನೆ ಜಾರಿ ತರುವಂತೆ ಸಲಹೆ ನೀಡಿದರು.

ವಾಯುವಿಹಾರಿಗಳಿಗು ಕ್ರೀಡಾಂಗಣ ಬಳಕೆ ನೀತಿ ಅನ್ವಯವಾಗಲಿದ್ದು ಕ್ರೀಡಾಪಟುಗಳ ಅಭ್ಯಾಸಕ್ಕೆ ಅಡಚಣೆ ಆಗದಂತೆ ಪ್ರತ್ಯೇಕವಾಗಿ ನಿರ್ಮಿಸಿರುವ ವಾಕಿಂಗ್ ಪಾಥ್?ಬಳಸುವಂತೆ ಕಡ್ಡಾಯಪಡಿಸಿ. ಕ್ರೀಡಾಂಗಣವನ್ನು ನಿರ್ವಹಣೆ ಹೊರೆಯಾಗದಂತೆ ನೋಡಿಕೊಳ್ಳುವುದು ಕ್ರೀಡಾ ಇಲಾಖೆ ಜವಾಬ್ದಾರಿ ಎಂದು ತಿಳಿಸಿದರು.

ಗ್ಯಾರಂಟಿ ಅನುಷ್ಠಾನಗಳ ಸಮಿತಿ ಜಿಲ್ಲಾಧ್ಯಕ್ಷ ಜಿ.ಚಂದ್ರಶೇಖರಗೌಡ, ಮಾಜಿ ಉಪಮೇಯರ್ ರೂಪಶ್ರೀ, ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಪಂ ಸಿಇಒ ಜಿ.ಪ್ರಭು, ಎಸ್ಪಿ ಕೆ.ವಿ.ಅಶೋಕ್, ಪಾಲಿಕೆ ಆಯುಕ್ತೆ ಬಿ.ವಿ.ಅಶ್ವಿಜ ಮತ್ತಿತರರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ವಿಶೇಷ ಉಪಹಾರ ವ್ಯವಸ್ಥೆ ಮಾಡಲಾಗಿತ್ತು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper